ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 4/1/2020

ಸಣ್ ಸುದ್ದಿ

## ಸಚಿವ ಈಶ್ವರಪ್ಪಗೆ ಜೀವ ಬೆದರಿಕೆ ಕರೆ

ಶಿವಮೊಗ್ಗ: ಸಚಿವ ಕೆ.ಎಸ್. ಈಶ್ವರಪ್ಪ ಅವರಿಗೆ ಅನಾಮಧೇಯ ವ್ಯಕ್ತಿಯಿಂದ ಶುಕ್ರವಾರ ಜೀವ ಬೆದರಿಕೆ ಕರೆ ಬಂದಿದೆ. ಚೆನ್ನೈನಿಂದ ಅಪರಿಚಿತ ವ್ಯಕ್ತಿಯೊಬ್ಬ ಈಶ್ವರಪ್ಪ ಮೊಬೈಲ್‌ಗೆ ಕರೆ ಮಾಡಿ ಹಿಂದಿಯಲ್ಲಿ ಮಾತನಾಡುತ್ತಾ ಆರಂಭದಲ್ಲಿ ವಿಮೆ ಕುರಿತು ವಿಚಾರಿಸಿದ್ದಾನೆ. ಆ ಬಳಿಕ ಪೌರತ್ವ ತಿದ್ದುಪಡಿ ಕಾಯ್ದೆ ಸಂಬಂಧ ಮಾತನಾಡದಂತೆ ತಾಕೀತು ಮಾಡಿದ್ದಾನೆ. ಇದನ್ನು ಉಲ್ಲಂಘಿಸಿದಲ್ಲಿ ಜೀವ ತೆಗೆಯುವುದಾಗಿ ಬೆದರಿಕೆ ಒಡ್ಡಿದ್ದಾನೆ ಎಂದು ಈಶ್ವರಪ್ಪ ಆಪ್ತರು ತಿಳಿಸಿದ್ದಾರೆ. ಈ ವಿಷಯವನ್ನು ಈಶ್ವರಪ್ಪನವರ ಆಪ್ತ ಸಹಾಯಕ ಪೊಲೀಸರ ಗಮನಕ್ಕೆ ತಂದಿದ್ದು, ವಿಶೇಷ ಭದ್ರತೆ ಒದಗಿಸಲಾಗಿದೆ.